ಕರ್ನಾಟಕ ಸರ್ಕಾರ
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ
ಆಯುಕ್ತರ ಕಛೇರಿ, ನಂ.16-ಡಿ, 3ನೇ ಮಹಡಿ, ಡಿ. ದೇವರಾಜ ಅರಸು ಭವನ,
ಮಿಲ್ಲರ್ಸ್ ಕೆರೆ ಅಂಗಳ, ವಸಂತ ನಗರ, ಬೆಂಗಳೂರು-560052.

ಸಂ:ಹಿಂವಕಇ/ತ-1/ಪಪೂತ/ಸಿಆರ್-01/2025-26 ದಿನಾಂಕ:26.05.2025.

**ಪ್ರಕಟಣೆ**

ಯು.ಪಿ.ಎಸ್.ಸಿ ನಾಗರಿಕ ಸೇವೆ ಮತ್ತು ಬ್ಯಾಂಕಿಂಗ್ ಪಿ.ಓ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ 2025-26ನೇ ಸಾಲಿನಲ್ಲಿ ಉಚಿತ ಪರೀಕ್ಷಾ ಪೂರ್ವ ತರಬೇತಿ ನೀಡುತ್ತಿದ್ದು, ರಾಜ್ಯದ ಹಿಂದುಳಿದ ವರ್ಗಗಳ ಪ್ರವರ್ಗ-1, 2(ಎ), 3(ಎ) ಹಾಗೂ 3(ಬಿ) ಗಳಿಗೆ ಸೇರಿದ ಅರ್ಹ ಅಭ್ಯರ್ಥಿಗಳಿಂದ ಆನ್-ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಆನ್-ಲೈನ್ ಮೂಲಕ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ:15.06.2025 ಆಗಿರುತ್ತದೆ.

ಅರ್ಹತೆ ಮತ್ತು ಸೂಚನೆಗಳು:

1. ಅಂಗೀಕೃತ ವಿಶ್ವವಿದ್ಯಾಲಯದಿಂದ ಯಾವುದಾದರೊಂದು ಪದವಿ ಪಡೆದಿರಬೇಕು.
2. ಅಭ್ಯರ್ಥಿಯು ಹಿಂದುಳಿದ ವರ್ಗಗಳ ಪ್ರವರ್ಗ-1, 2(ಎ), 3(ಎ) ಅಥವಾ 3(ಬಿ) ಗೆ ಸೇರಿರಬೇಕು.
3. ಅಭ್ಯರ್ಥಿಯ ಮತ್ತು ಕುಟುಂಬದ ಒಟ್ಟು ವಾರ್ಷಿಕ ಆದಾಯ ಮಿತಿ – ಪ್ರವರ್ಗ1, ಪ್ರವರ್ಗ 2(ಎ), 3(ಎ) ಮತ್ತು 3(ಬಿ) ಗಳಿಗೆ ರೂ.5.00 ಲಕ್ಷ.
4. ಅಭ್ಯರ್ಥಿಗಳನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರ (KEA) ರವರು ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಗಳಲ್ಲಿ ಗಳಿಸಿದ ಅಂಕಗಳು, ಪ್ರವರ್ಗ ಹಾಗೂ ಮೀಸಲಾತಿ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.
5. ಪರೀಕ್ಷಾ ಕೇಂದ್ರಗಳು, ದಿನಾಂಕ ಮತ್ತು ಸಮಯವನ್ನು ನಂತರದ ದಿನಗಳಲ್ಲಿ ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು.
6. ಹೆಚ್ಚಿನ ವಿವರಗಳಿಗಾಗಿ ಇಲಾಖಾ ವೆಬ್‌ಸೈಟ್ **https://bcwd.karnataka.gov.in** ಅಥವಾ **sevasindhuservices.karnataka.gov.in** ಅನ್ನು ನೋಡುವುದು.

ಸಹಾಯ ವಾಣಿ:8050770006 (ಸಮಯ ಬೆಳಗ್ಗೆ 10.00 ರಿಂದ ಸಂಜೆ 5.30ರ ವರೆಗೆ, ಸಾರ್ವಜನಿಕ ರಜಾ ದಿನಗಳನ್ನು ಹೊರತು ಪಡಿಸಿ)

8050370006

ಆಯುಕ್ತರು,
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ,
ಬೆಂಗಳೂರು.

ಕರ್ನಾಟಕ ಸರ್ಕಾರ
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ
ಆಯುಕ್ತರ ಕಛೇರಿ, ನಂ.16-ಡಿ, 3ನೇ ಮಹಡಿ, ಡಿ. ದೇವರಾಜ ಅರಸು ಭವನ,
ಮಿಲ್ಲರ್ಸ್ ಕೆರೆ ಅಂಗಳ, ವಸಂತನಗರ, ಬೆಂಗಳೂರು-560052.
ಅಭ್ಯರ್ಥಿಗಳಿಗೆ ಸೂಚನೆಗಳು (Instructions to Candidates)
(ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಅಲ್ಪಸಂಖ್ಯಾತ ಅಭ್ಯರ್ಥಿಗಳಿಗೆ ಆಯಾ ಇಲಾಖೆಯಿಂದ ತರಬೇತಿ ನೀಡುತ್ತಿರುವ ಕಾರಣ ಸಂಬಂಧಪಟ್ಟ ಇಲಾಖೆಗಳಲ್ಲಿ ಈ ಯೋಜನೆಯ ಬಗ್ಗೆ ಮಾಹಿತಿಗಾಗಿ ಸಂಪರ್ಕಿಸುವುದು)

ಸಂ:ಹಿಂವಕಇ/ತ-1/ಪಪೂತ/ಸಿಆರ್-01/2025-26 ದಿನಾಂಕ:26.05.2025

ಯು.ಪಿ.ಎಸ್.ಸಿ ನಾಗರಿಕ ಸೇವೆ ಮತ್ತು ಬ್ಯಾಂಕಿಂಗ್ ಪಿ.ಒ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ 2025-26ನೇ ಸಾಲಿಗೆ ಉಚಿತ ಪರೀಕ್ಷಾ ಪೂರ್ವ ತರಬೇತಿ ನೀಡುತ್ತಿದ್ದು, ರಾಜ್ಯದ ಹಿಂದುಳಿದ ವರ್ಗಗಳ ಪ್ರವರ್ಗ-1, 2(ಎ), 3(ಎ) ಹಾಗೂ 3(ಬಿ) ಗಳಿಗೆ ಸೇರಿದ ಅರ್ಹ ಅಭ್ಯರ್ಥಿಗಳು ಆನ್-ಲೈನ್ ಮೂಲಕ ಮಾತ್ರ ಅರ್ಜಿಗಳನ್ನು ಸಲ್ಲಿಸಬಹುದಾಗಿರುತ್ತದೆ.

1. ಈ ಹಿಂದೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಯಾವುದೇ ಸ್ಪರ್ಧಾತ್ಮಕ ಪರೀಕ್ಷೆಯ ಪರೀಕ್ಷಾ ಪೂರ್ವ ತರಬೇತಿ ಪಡೆದಿದ್ದಲ್ಲಿ, ಅಂತಹ ಅಭ್ಯರ್ಥಿಗಳು ಪುನಃ ಅರ್ಜಿ ಸಲ್ಲಿಸಲು ಮತ್ತು ತರಬೇತಿ ಪಡೆಯಲು ಅರ್ಹರಿರುವುದಿಲ್ಲ.
2. ಕೇಂದ್ರ/ರಾಜ್ಯ ಸರ್ಕಾರದ/ಅನುದಾನಿತ ಸಂಸ್ಥೆಗಳ/ಸಾರ್ವಜನಿಕ ಸ್ವಾಮ್ಯತೆಗೆ ಒಳಪಟ್ಟ ಸಂಸ್ಥೆಗಳಲ್ಲಿನ ನೌಕರರು ಸದರಿ ಕಾರ್ಯಕ್ರಮದಡಿ ಅರ್ಜಿ ಸಲ್ಲಿಸಲು ಮತ್ತು ತರಬೇತಿ ಪಡೆಯಲು ಅರ್ಹರಿರುವುದಿಲ್ಲ.
3. ಅಭ್ಯರ್ಥಿಯು ಕರ್ನಾಟಕದ ಖಾಯಂ ನಿವಾಸಿಯಾಗಿರಬೇಕು.
4. ಯು.ಪಿ.ಎಸ್.ಸಿ ನಾಗರಿಕ ಸೇವೆ ಮತ್ತು ಬ್ಯಾಂಕಿಂಗ್ ಪಿ.ಒ ಸ್ಪರ್ಧಾತ್ಮಕ ಪರೀಕ್ಷೆಗಳ ಪರೀಕ್ಷಾ ಪೂರ್ವ ತರಬೇತಿಗೆ ಅಭ್ಯರ್ಥಿಗಳು ಒಂದೇ ಅರ್ಜಿಯನ್ನು ಸಲ್ಲಿಸುವುದು. ಒಬ್ಬ ಅಭ್ಯರ್ಥಿಗೆ ಒಂದು ತರಬೇತಿಯನ್ನು ಮಾತ್ರ ಪಡೆಯಲು ಅವಕಾಶವಿರುತ್ತದೆ. ಅನುದಾನದ ಲಭ್ಯತೆಗನುಗುಣವಾಗಿ ಭೌತಿಕ ಗುರಿ ಹಾಗೂ ಮಾಸಿಕ ಶಿಷ್ಯವೇತನ ನಿಗದಿಪಡಿಸಲಾಗುವುದು.
5. ತರಬೇತಿಯ ಅವಧಿ:

| ಕ್ರ. ಸಂ. | ಪರೀಕ್ಷಾ ಪೂರ್ವ ತರಬೇತಿ ಹೆಸರು | ವಿಷಯ | ತರಬೇತಿ ಅವಧಿ |
|---|---|---|---|
| 1 | ಯು.ಪಿ.ಎಸ್.ಸಿ ನಾಗರಿಕ ಸೇವೆ | ಪೂರ್ವಭಾವಿ ಮತ್ತು ಮುಖ್ಯ ಪರೀಕ್ಷೆ (General Studies, 1 Optional Subject and personal interview) | 7-9 ತಿಂಗಳು |
| 3 | ಬ್ಯಾಂಕಿಂಗ್ ಪಿ.ಒ | ಬ್ಯಾಂಕಿಂಗ್ ಪಿ.ಒ ನೇಮಕಾತಿ ಪರೀಕ್ಷೆಯ ಸಮಗ್ರ ವಿಷಯಗಳು | ಕನಿಷ್ಠ 3 ತಿಂಗಳುಗಳು |

7. 2005ನೇ ಸಾಲಿನ ಪೂರ್ವದಲ್ಲಿ SSLC ಉತ್ತೀರ್ಣರಾದ ಅಭ್ಯರ್ಥಿಗಳು ತಮ್ಮ ಹತ್ತನೇ ತರಗತಿಯ ಮೂಲ ಅಂಕಪಟ್ಟಿಯೊಂದಿಗೆ ಹತ್ತಿರದ ಜಿಲ್ಲೆಯ ಜಿಲ್ಲಾ/ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಛೇರಿಗೆ ಹೋಗಿ ಅಂಕಪಟ್ಟಿಯ

ವಿವರವನ್ನು entry ಮಾಡಿಸಿ, ನಂತರ ಅರ್ಜಿ ಸಲ್ಲಿಸುವುದು.

8. CBSE ಮತ್ತು ICSE ಹಾಗೂ ಇತರೆ ರಾಜ್ಯಗಳಲ್ಲಿ ಹತ್ತನೇ ತರಗತಿಯಲ್ಲಿ ಉತ್ತೀರ್ಣರಾಗಿರುವ ಮತ್ತು ಸದರಿ ಕಾರ್ಯಕ್ರಮದಡಿ ಪರೀಕ್ಷಾ ಪೂರ್ವ ತರಬೇತಿಗೆ ಅರ್ಹರಿರುವ ಕರ್ನಾಟಕ ರಾಜ್ಯದ ಅಭ್ಯರ್ಥಿಗಳು ತಮ್ಮ ಹತ್ತನೇ ತರಗತಿಯ ಮೂಲ ಅಂಕಪಟ್ಟಿಯೊಂದಿಗೆ ಹತ್ತಿರದ ಜಿಲ್ಲೆಯ ಜಿಲ್ಲಾ/ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಛೇರಿಗೆ ಹೋಗಿ ಅಂಕಪಟ್ಟಿಯ ವಿವರವನ್ನು entry ಮಾಡಿಸಿ, ನಂತರ ಅರ್ಜಿ ಸಲ್ಲಿಸುವುದು.

9. ಅರ್ಹತೆ:

a. ಅಭ್ಯರ್ಥಿಯು ಕರ್ನಾಟಕ ರಾಜ್ಯದ ಖಾಯಂ ನಿವಾಸಿಯಾಗಿರಬೇಕು.

b. ಹಿಂದುಳಿದ ವರ್ಗಗಳಾದ ಪ್ರವರ್ಗ-1, 2(ಎ), 3(ಎ) ಅಥವಾ 3(ಬಿ) ಗಳಿಗೆ ಸೇರಿರಬೇಕು.

c. ಅಭ್ಯರ್ಥಿಯ ಮತ್ತು ಕುಟುಂಬದ ಒಟ್ಟು ವಾರ್ಷಿಕ ಆದಾಯ ಮಿತಿ – ಪ್ರವರ್ಗ1, ಪ್ರವರ್ಗ2(ಎ), 3(ಎ) ಮತ್ತು 3(ಬಿ) ಗಳಿಗೆ ರೂ.5.00 ಲಕ್ಷ.

d. ವಿದ್ಯಾರ್ಹತೆ– ಅಂಗೀಕೃತ ವಿಶ್ವವಿದ್ಯಾಲಯದಿಂದ ಪದವಿಯನ್ನು ಪಡೆದಿರಬೇಕು.

e. ತರಬೇತಿಗೆ ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ವಯೋಮಿತಿ (15.06.2025ಕ್ಕೆ ಅನ್ವಯಿಸುವಂತೆ)–

| ಕ್ರ. ಸಂ | ಪರೀಕ್ಷಾ ಪೂರ್ವ ತರಬೇತಿ | ಕನಿಷ್ಠ ವಯಸ್ಸು | ಗರಿಷ್ಠ ವಯಸ್ಸು |
|---|---|---|---|
| 1 | ಯು.ಪಿ.ಎಸ್.ಸಿ ನಾಗರಿಕ ಸೇವೆ | 21 | 31 |
| 2 | ಬ್ಯಾಂಕಿಂಗ್ ಪಿ.ಒ | 21 | 27 |

ಅಭ್ಯರ್ಥಿಯ ಪಾಸ್‌ಪೋರ್ಟ್ ಅಳತೆಯ ಇತ್ತೀಚಿನ ಭಾವಚಿತ್ರವನ್ನು JPG/JPEG format ನಲ್ಲಿ upload ಮಾಡಬೇಕು (1 MB ಒಳಗಡೆ).

10. ಅಭ್ಯರ್ಥಿಗಳು ಯು.ಪಿ.ಎಸ್.ಸಿ ನಾಗರಿಕ ಸೇವೆ, ಬ್ಯಾಂಕಿಂಗ್ ಪಿ.ಒ ಅಥವಾ ಎರಡೂ ಸ್ಪರ್ಧಾತ್ಮಕ ಪರೀಕ್ಷೆಗಳ ಪರೀಕ್ಷಾ ಪೂರ್ವ ತರಬೇತಿಗಳಿಗೆ ಅವರ ವಯೋಮಿತಿ ಆಧಾರದ ಮೇಲೆ ಅರ್ಜಿಯಲ್ಲಿ ಆಸಕ್ತಿ ನಮೂದಿಸಬಹುದಾಗಿದ್ದು, ಅದರಂತೆಯೇ ಅಭ್ಯರ್ಥಿಗಳು ಸಾಮಾನ್ಯ ಪ್ರವೇಶ ಪರೀಕ್ಷೆಗಳನ್ನು ಬರೆಯಲು ಅರ್ಹರಿರುತ್ತಾರೆ.

11. ಒಂದು ವೇಳೆ ಅಭ್ಯರ್ಥಿಯು ಸದರಿ ಎರಡೂ ಸಾಮಾನ್ಯ ಪ್ರವೇಶ ಪರೀಕ್ಷೆಗಳಲ್ಲಿ ಉತ್ತಮ ಅಂಕಗಳನ್ನು ಪಡೆದರೆ, ಎರಡರಲ್ಲಿ ಅಂತಿಮವಾಗಿ ಅಭ್ಯರ್ಥಿಯು ಯಾವುದಾದರು ಒಂದು ತರಬೇತಿಯನ್ನು ಮಾತ್ರ ಪಡೆಯಲು ಅರ್ಹರಿರುತ್ತಾರೆ.

12. ಅಭ್ಯರ್ಥಿಯ ಬ್ಯಾಂಕ್ ಖಾತೆಯ ವಿವರ: ಅಭ್ಯರ್ಥಿಯು ಯಾವುದೇ ಬ್ಯಾಂಕ್‌ನಲ್ಲಿ ತನ್ನ ಖಾತೆಯನ್ನು ಹೊಂದಿದ್ದು, ಬ್ಯಾಂಕ್‌ನ ಹೆಸರು, ಶಾಖೆ, ಖಾತೆ ಸಂಖ್ಯೆ, IFSC ಕೋಡ್ ಗಳನ್ನು ಕಡ್ಡಾಯವಾಗಿ ಅರ್ಜಿಯ ನಿಗದಿತ ಸ್ಥಳದಲ್ಲಿ ನಮೂದಿಸುವುದು. (ತಪ್ಪು ಮಾಹಿತಿಯ ಕಾರಣದಿಂದ ಉಂಟಾಗಬಹುದಾದ ಲೋಪಗಳಿಗೆ ಸಂಬಂಧಪಟ್ಟ ಅಭ್ಯರ್ಥಿಗಳೇ ಜವಾಬ್ದಾರರಾಗುತ್ತಾರೆ). ಮುಂದುವರೆದು ಅಭ್ಯರ್ಥಿಯ ಬ್ಯಾಂಕ್ ಖಾತೆ ವಿವರವು ಅವರ ಆಧಾರ್ ಸಂಖ್ಯೆಗೆ ಲಿಂಕ್ ಆಗಿರಬೇಕು ಮತ್ತು ಚಾಲ್ತಿಯಲ್ಲಿರಬೇಕು.

13. ಇಲಾಖಾವತಿಯಿಂದ ಯಾವುದೇ ಪತ್ರ ವ್ಯವಹಾರವನ್ನು ನಡೆಸಲಾಗುವುದಿಲ್ಲವಾದ್ದರಿಂದ ಇಲಾಖಾ ವೆಬ್ ಸೈಟ್ ಅನ್ನು ಕಾಲಕಾಲಕ್ಕೆ ವೀಕ್ಷಿಸತಕ್ಕದ್ದು ಹಾಗೂ ವೆಬ್ ಸೈಟ್ ನಲ್ಲಿ ನೀಡಲಾದ ಸೂಚನೆಯಾನುಸಾರವಾಗಿ ಪ್ರವೇಶ ಪರೀಕ್ಷಾ ಪತ್ರ ಡೌನ್ ಲೋಡ್ ಮಾಡಿಕೊಂಡು, ಸಾಮಾನ್ಯ ಪ್ರವೇಶ ಪರೀಕ್ಷೆಗೆ,

ತರಬೇತಿ ಸಂಸ್ಥೆಯ ಆಯ್ಕೆ ಹಾಗೂ ಮೂಲ ದಾಖಲೆಗಳ ಪರಿಶೀಲನೆ ಮಾಡಿಸಿಕೊಳ್ಳುವುದು.

14. ಸಾಮಾನ್ಯ ಪ್ರವೇಶ ಪರೀಕ್ಷೆ:

a. ಯು.ಪಿ.ಎಸ್.ಸಿ ನಾಗರಿಕ ಸೇವೆ ಮತ್ತು ಬ್ಯಾಂಕಿಂಗ್ ಪಿ.ಒ ಪರೀಕ್ಷೆಗಳ ಪರೀಕ್ಷಾ ಪೂರ್ವ ತರಬೇತಿಗಳಿಗೆ ಆಯಾ ಪರೀಕ್ಷಾ ಪ್ರಾಧಿಕಾರಗಳು ನಿಗದಿಪಡಿಸಿರುವ ಪಠ್ಯಕ್ರಮದನ್ವಯ ಸಾಮಾನ್ಯ ಪ್ರವೇಶ ಪರೀಕ್ಷೆಯನ್ನು ನಡೆಸಲಾಗುವುದು.

b. ಯು.ಪಿ.ಎಸ್.ಸಿ ನಾಗರಿಕ ಸೇವೆ ಮತ್ತು ಬ್ಯಾಂಕಿಂಗ್ ಪಿ.ಒ ಪರೀಕ್ಷಾ ಪೂರ್ವ ತರಬೇತಿಗಳಿಗಾಗಿ ಒಟ್ಟು 100 ಅಂಕಗಳಿಗೆ ಬಹು ಆಯ್ಕೆ ಪ್ರಶ್ನೆಗಳು ಇರುವಂತೆ ಎರಡೂ ಸಾಮಾನ್ಯ ಪ್ರವೇಶ ಪರೀಕ್ಷೆಗಳನ್ನು ಪ್ರತ್ಯೇಕವಾಗಿ ನಡೆಸಲಾಗುವುದು.

16. ಸಾಮಾನ್ಯ ಪ್ರವೇಶ ಪರೀಕ್ಷೆಗೆ ಸೂಚನೆಗಳು:

a. ಸಾಮಾನ್ಯ ಪ್ರವೇಶ ಪರೀಕ್ಷೆ ನಡೆಸುವ ದಿನಾಂಕ, ಸಮಯ, ಸ್ಥಳ ಮುಂತಾದ ಮಾಹಿತಿಯನ್ನು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾ ವೆಬ್ ಸೈಟ್‌ನಲ್ಲಿ ನಂತರದ ದಿನಗಳಲ್ಲಿ ಪ್ರಕಟಿಸಲಾಗುವುದು.

17. ಆಯ್ಕೆ ವಿಧಾನ - ಹಿಂದುಳಿದ ವರ್ಗಗಳ ಕಲಾಣ ಇಲಾಖಾವತಿಯಿಂದ ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಯಲ್ಲಿ ಅಭ್ಯರ್ಥಿಗಳು ಗಳಿಸಿದ ಅಂಕಗಳು, ಮೀಸಲಾತಿ(ಪ್ರವರ್ಗವಾರು, ವಿಶೇಷಚೇತನ ಮತ್ತು ಮಹಿಳೆ), ವಿವಿಧ ಸಂಸ್ಥೆಗಳಿಗೆ ನಿಗದಿಪಡಿಸುವ ಸ್ಥಾನಗಳು ಹಾಗೂ ಸರ್ಕಾರದ ಮಾರ್ಗಸೂಚಿಗಳನ್ವಯ ಅಭ್ಯರ್ಥಿಗಳನ್ನು ಅವರ ಮೂಲ ದಾಖಲೆಗಳ ಪರಿಶೀಲನೆ ಮಾಡಿದ ನಂತರ ತರಬೇತಿಗಾಗಿ ಕೌನ್ಸಿಲಿಂಗ್ ಮೂಲಕ ಆಯ್ಕೆ ಮಾಡಿ ನಿಯೋಜಿಸಲಾಗುವುದು.

18. ಅಂತಿಮವಾಗಿ ಅರ್ಜಿಯನ್ನು submit ಮಾಡುವ ಮುನ್ನ ಎಲ್ಲಾ ಅಂಶಗಳೂ ಸರಿಯಾಗಿರುವ ಬಗ್ಗೆ ಅಭ್ಯರ್ಥಿಗಳು ಖಚಿತ ಪಡಿಸಿಕೊಳ್ಳಬೇಕು. ಸರಿಯಾದ ಮಾಹಿತಿ ನೀಡದ/ಅಪೂರ್ಣ ಇರುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

19. ಅಭ್ಯರ್ಥಿಯು ತಪ್ಪು ಮಾಹಿತಿ ನೀಡಿರುವುದು/ಅನರ್ಹ ಅಭ್ಯರ್ಥಿಯೆಂದು ಯಾವುದೇ ಹಂತದಲ್ಲಿ ಕಂಡು ಬಂದಲ್ಲಿ ಅಂತಹ ಅಭ್ಯರ್ಥಿಯ ವಿರುದ್ಧ ನಿಯಮಾನುಸಾರ ಸೂಕ್ತ ಕ್ರಮ ಜರುಗಿಸಲಾಗುವುದು.

20. ಅರ್ಜಿಯನ್ನು ಒಮ್ಮೆ ಮಾತ್ರ ಸಲ್ಲಿಸಲು ಅವಕಾಶವಿದ್ದು, ಅರ್ಜಿಯನ್ನು ಸಲ್ಲಿಸಿದ ನಂತರ edit ಅಥವಾ delete option ಗೆ ಅವಕಾಶವಿರುವುದಿಲ್ಲ.

21. ಅರ್ಜಿ ಸಲ್ಲಿಸಿದ ನಂತರ, ಅರ್ಜಿಯ ಪ್ರತಿಯನ್ನು Print ತೆಗೆದುಕೊಂಡು ಅಭ್ಯರ್ಥಿಗಳು ತಮ್ಮ ಬಳಿ ಇಟ್ಟುಕೊಳ್ಳುವುದು.

22. ಆನ್-ಲೈನ್ ಮೂಲಕ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ:15.06.2025.

8050370006

ಸಹಾಯ ವಾಣಿ:8050370006 (ಸಮಯ ಬೆಳಗ್ಗೆ 10.00 ರಿಂದ ಸಂಜೆ 5.30ರ ವರೆಗೆ, ಸಾರ್ವಜನಿಕ ರಜಾ ದಿನಗಳನ್ನು ಹೊರತು ಪಡಿಸಿ)

ಆಯುಕ್ತರು,
ಹಿಂದುಳಿದ ವರ್ಗಗಳ ಕಲಾಣ ಇಲಾಖೆ,
ಬೆಂಗಳೂರು.